# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : **113** |
| ಸದಸ್ಯರ ಹೆಸರು | : ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : **05/07/2023** |
| ಉತ್ತರಿಸುವ ಸಚಿವರು | : ಕಂದಾಯ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಭೂ ಪರಿವರ್ತನೆಗೆ ಇರುವ ಕಾನೂನುಗಳು ಹಾಗೂ ನಿಯಮಗಳೇನು; ಎಷ್ಟು ಎಕರೆಯವರೆಗೆ ಭೂ ಪರಿವರ್ತನೆ ಮಾಡಲು ನಿಯಮಗಳಲ್ಲಿ ಅವಕಾಶವಿದೆ: (ಮಾಹಿತಿ ನೀಡುವುದು) | ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 95 ಮತ್ತು ಕರ್ನಾಟಕ ಭೂ ಕಂದಾಯ ನಿಯಮ, 1966ರ ನಿಯಮ 107 ರಲ್ಲಿ ವಿಧಿಸಿರುವ ದರಗಳನ್ವಯ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ಕಂದಾಯದ ನಿರ್ಧರಣೆ ಆಗಿರುವ ಅಥವಾ ಬೇಸಾಯದ ಉದ್ದೇಶಕ್ಕಾಗಿ ಹೊಂದಿರುವ ಭೂಮಿಯ ಅಧಿಭೋಗದಾರನು ಅಂಥ ಭೂಮಿಯನ್ನು ಅಥವಾ ಅದರ ಯಾವುದೇ ಭಾಗವನ್ನು ಯಾವುದೇ ಇತರ ಉದ್ದೇಶಕ್ಕಾಗಿ ಬದಲಿಸಲು ಇಚ್ಛಿಸಿದರೆ, ಆತನು ನಿಯಮಿಸಬಹುದಾದಂಥ ರೀತಿಯಲ್ಲಿ ಒಂದು ಅಫಿಡಾವಿಟ್ ಜೊತೆಗೆ ಜಿಲ್ಲಾಧಿಕಾರಿಗೆ ಅರ್ಜಿಯನ್ನು ಸಲ್ಲಿಸತಕ್ಕದ್ದು.<br><br>ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 (1963ರ ಕರ್ನಾಟಕ ಅಧಿನಿಯಮ 11)ರ ಉಪಬಂಧಗಳ ಮೇರೆಗೆ ಸಂಬಂಧಪಟ್ಟ ಭೂಮಿಯ ಸಂಬಂಧದಲ್ಲಿ ಯುಕ್ತವಾಗಿ ಪ್ರಕಟಿಸಲಾದ ಮಾಸ್ಟರ್ ಪ್ಲಾನ್‌ನಲ್ಲಿ ನಿರ್ದಿಷ್ಟಪಡಿಸಿದ ಬಳಕೆ ಅನುಸಾರವಾಗಿ ಬದಲಾವಣೆಯನ್ನು ಕೋರಿದರೆ ನಿಯಮಿಸಲಾದ ಶುಲ್ಕ ಪಾವತಿಗೆ ಒಳಪಟ್ಟು ಅದನ್ನು ಬದಲಾಯಿಸಲಾಗಿದೆ ಎಂದು ಭಾವಿಸತಕ್ಕದ್ದು ಮತ್ತು ಜಿಲ್ಲಾಧಿಕಾರಿಯು ಅರ್ಜಿಯ ಸ್ವೀಕೃತಿಯ ದಿನಾಂಕದಿಂದ ಏಳು ದಿನಗಳೊಳಗಾಗಿ ಅದಕ್ಕನುಸಾರವಾಗಿ ಅನುಮೋದನೆ ಆದೇಶ ಹೊರಡಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಪರಂತು, ಜಿಲ್ಲಾಧಿಕಾರಿಯು ಅರ್ಜಿಯ ಸ್ವೀಕೃತಿಯ ದಿನಾಂಕದಿಂದ ಹದಿನೈದು ದಿನಗಳೊಳಗಾಗಿ ತನ್ನ ನಿರ್ಣಯವನ್ನು ನೀಡಲು ವಿಫಲನಾದ ಸಂದರ್ಭದಲ್ಲಿ ಜಿಲ್ಲಾಧಿಕಾರಿಯು ಭೂ ಬಳಕೆ ಬದಲಾವಣೆಗಾಗಿ ಅನುಮೋದನೆಯನ್ನು ನೀಡಿದ್ದಾರೆಂದು ಭಾವಿಸತಕ್ಕದ್ದು ಮತ್ತು ನಿಯಮಿಸಲಾದ ಶುಲ್ಕದ ಸಂದಾಯದ ತರುವಾಯ ನಿಯಮಿಸಬಹುದಾದಂಥ ರೀತಿಯಲ್ಲಿ ಆದೇಶ ಹೊರಡಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಮಾಸ್ಟರ್ ಪ್ಲಾನನ್ನು ಪ್ರಕಟಿಸದಿರುವ ಸಂದರ್ಭದಲ್ಲಿ ಅಥವಾ ಭೂಮಿಯು ಸ್ಥಳೀಯ ಯೋಜನಾ ಪ್ರದೇಶದ ಹೊರಗೆ ಬರುವಲ್ಲಿ ಸಂಬಂಧಪಟ್ಟ ಪ್ರಾಧಿಕಾರಗಳು ಅರ್ಜಿಯನ್ನು ಸ್ವೀಕರಿಸಿದ ದಿನಾಂಕದಿಂದ ಹದಿನೈದು ದಿನಗಳೊಳಗಾಗಿ ತಮ್ಮ ಅಭಿಪ್ರಾಯವನ್ನು ಸಲ್ಲಿಸತಕ್ಕದ್ದು, ಜಿಲ್ಲಾಧಿಕಾರಿಯು ನಿಯಮಿಸಲಾದ ಶುಲ್ಕದ ಸಂದಾಯಕ್ಕೆ ಒಳಪಟ್ಟು ಮತ್ತು ಸಂಬಂಧಪಟ್ಟ ಪ್ರಾಧಿಕಾರಗಳು ಸಲ್ಲಿಸಿದ ಅಭಿಪ್ರಾಯಕ್ಕೆ ಒಳಪಟ್ಟು |

| | | |
|---|---|---|
| | | ಅರ್ಜಿಯ ಅನುಸಾರ ಭೂ ಬಳಕೆ ಬದಲಾವಣೆಗಾಗಿ ಅನುಮೋದನೆಯನ್ನು ನೀಡಲು ಅವಕಾಶವಿದೆ.<br><br>ಪರಂತು, ಪ್ರಾಧಿಕಾರಗಳು ಸದರಿ ಹದಿನೈದು ದಿನಗಳೊಳಗೆ ಯಾವುದೇ ಅಭಿಪ್ರಾಯ ಸಲ್ಲಿಸದಿರುವ ಸಂದರ್ಭದಲ್ಲಿ ಅರ್ಜಿಗನುಸಾರ ಸದರಿ ಭೂ ಬಳಕೆ ಬದಲಾವಣೆಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ಭಾವಿಸಿ ಆದೇಶ ಹೊರಡಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಜಿಲ್ಲಾಧಿಕಾರಿಯು, ಅರ್ಜಿಯ ಸ್ವೀಕೃತಿಯ ದಿನಾಂಕದಿಂದ ಮೂವತ್ತು ದಿನಗಳೊಳಗೆ ತನ್ನ ತೀರ್ಮಾನವನ್ನು ನೀಡಲು ಮತ್ತು ಆದೇಶವನ್ನು ಹೊರಡಿಸಲು ವಿಫಲನಾದ ಸಂದರ್ಭದಲ್ಲಿ ಜಿಲ್ಲಾಧಿಕಾರಿಯು ಭೂ ಬಳಕೆ ಬದಲಾವಣೆಗಾಗಿ ಅನುಮೋದನೆಯನ್ನು ನೀಡಿದ್ದಾರೆಂದು ಭಾವಿಸತಕ್ಕದ್ದು ಮತ್ತು ನಿಯಮಿಸಲಾದ ಶುಲ್ಕದ ಸಂದಾಯಕ್ಕೆ ಒಳಪಟ್ಟು ನಿಯಮಿಸಬಹುದಾದಂಥ ರೀತಿಯಲ್ಲಿ ಅದನ್ನು ಪ್ರಮಾಣೀಕರಿಸತಕ್ಕದ್ದು ಮತ್ತು ಹೊರಡಿಸಲು ಅವಕಾಶವಿದೆ (ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 95ನ್ನು ಅನುಬಂಧದಲ್ಲಿ ನೀಡಲಾಗದೆ).<br><br>ಭೂ ಪರಿವರ್ತನೆ ಮಾಡಲು ಯಾವುದೇ ಗರಿಷ್ಠ ಮಿತಿಯನ್ನು ನಿಗದಿಪಡಿಸಿರುವುದಿಲ್ಲ. |
| ಆ) | ಕೊಡಗು ಜಿಲ್ಲೆಯಲ್ಲಿ ಕಳೆದ 5 ವರ್ಷಗಳಲ್ಲಿ ಎಷ್ಟು ಎಕರೆ ಜಾಗವನ್ನು ಕೃಷಿಯೇತರ ಕಾರಣಗಳಿಗಾಗಿ ಭೂ ಪರಿವರ್ತನೆ ಮಾಡಲಾಗಿದೆ; ಇದರಿಂದಾಗಿ ಅಲ್ಲಿನ ಜನತೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು; | ಕೊಡಗು ಜಿಲ್ಲೆಯಲ್ಲಿ ಕಳೆದ 5 ವರ್ಷಗಳಲ್ಲಿ ಅಂದಾಜು 1319.45.61 ಎಕರೆ ಜಾಗವನ್ನು ಕೃಷಿಯೇತರ ಕಾರಣಗಳಿಗಾಗಿ ಭೂ ಪರಿವರ್ತನೆ ಮಾಡಲಾಗಿದೆ. ಇದರಿಂದಾಗಿ ತೊಂದರೆ ಆಗಿರುವ ಬಗ್ಗೆ ದೂರು ಬಂದಿರುವುದಿಲ್ಲ. |
| ಇ) | ಮೈಸೂರು, ಮಂಡ್ಯ ರಾಮನಗರ, ಬೆಂಗಳೂರು ಸೇರಿದಂತೆ ಇನ್ನೂ ಹಲವು ಜಿಲ್ಲೆಗಳಿಗೆ ಕೊಡಗಿನ ಕಾವೇರಿಯಿಂದ ನೀರು ಪೂರೈಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ರೀತಿ ಭೂ ಪರಿವರ್ತನೆಗೆ ಅವಕಾಶ ಕಲ್ಪಿಸಿರುವುದು ಯಾಕೆ; | ಬಂದಿದೆ. |
| ಈ) | ಈ ರೀತಿ ಲೆಕ್ಕವಿಲ್ಲದಷ್ಟು ಜಮೀನುಗಳನ್ನು ಭೂ ಪರಿವರ್ತನೆ ಮಾಡಲು ಅವಕಾಶಗಳನ್ನು ಕಲ್ಪಿಸಿ ಈಗಾಗಲೇ ನಿರಂತರವಾಗಿ ಸುರಿಯುವ ಮಳೆಯ ಪ್ರಮಾಣ ಮತ್ತು ಅಂತರ್ಜಲ ಕುಸಿತದಿಂದಾಗಿ ನೀರಿನ ಕೊರತೆ ಅನುಭವಿಸುತ್ತಿರುವುದು ಈ ಭೂ ಪರಿವರ್ತನೆಯೇ ಕಾರಣ ಎಂಬುದು ಜನತೆಯ ದೂರು ಆಗಿದ್ದು, ಈ ಕುರಿತು ಸರ್ಕಾರ ತೆಗೆದುಕೊಂಡ ಕ್ರಮವೇನು; | ಕೊಡಗು ಜಿಲ್ಲೆಯಲ್ಲಿ 2018ರಲ್ಲಿ ಪ್ರಕೃತಿ ವಿಕೋಪದ ಹಿನ್ನೆಲೆಯಲ್ಲಿ ಕೃಷಿ ಜಮೀನುಗಳನ್ನು ಕೃಷಿಯೇತರ ಉದ್ದೇಶಗಳಿಗೆ ಭೂ ಪರಿವರ್ತಿಸುವುದನ್ನು ಸ್ಥಗಿತಗೊಳಿಸಲಾಗಿತ್ತು. ತದನಂತರ ವಾಸದ ಉದ್ದೇಶಕ್ಕಾಗಿ ಮನೆ ನಿರ್ಮಿಸುವವರಿಗೆ 15-20 ಸೆಂಟ್ ವಿಸ್ತೀರ್ಣದ ಜಮೀನನ್ನು ಸ್ಥಳ ಪರಿಶೀಲನೆ ಮಾಡಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 95ರಡಿ ಆದೇಶ ನೀಡಲು ದಿನಾಂಕ: 08.05.2019ರಲ್ಲಿ ಸರ್ಕಾರದ ಅನುಮತಿ ನೀಡಲಾಗಿತ್ತು.<br><br>ಮುಂದುವರೆದು, ವಾಣಿಜ್ಯ ಕಟ್ಟಡಗಳು, ಶಾಲೆಗಳು, ರೆಸಾರ್ಟ್‌ಗಳು, ಪೆಟ್ರೋಲ್ ಬಂಕ್‌ಗಳು ಅಥವಾ ಖಾಸಗಿ |

<table>
<tr>
<td></td>
<td></td>
<td>ಉದ್ಯಮ ಪ್ರಾರಂಭಿಸಲು ತೊಡಕು ಉಂಟಾಗಿರುವ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಸರ್ಕಾರದ ಸಂಖ್ಯೆ: ಆರ್‌ಡಿ 24 ಎಲ್‌ಜಿಬಿ 2018, ದಿನಾಂಕ:04.06.2020ರ ಆದೇಶದಲ್ಲಿ ಕೊಡಗು ಜಿಲ್ಲೆಯಲ್ಲಿ ಭಾರತೀಯ ಭೂ ವೈಜ್ಞಾನಿಕ ಸರ್ವೇಕ್ಷಣಾ ಇಲಾಖೆಯ ಅಧ್ಯಯನದಲ್ಲಿ ಗುರುತಿಸಿರುವ 10% ತೀವ್ರ ಅಪಾಯಕಾರಿ ಭೂ ಭಾಗಗಳು ಮತ್ತು 2018 ಮತ್ತು 2019ನೇ ಸಾಲಿನಲ್ಲಿ ಭೂ ಕುಸಿತಕ್ಕೆ ಒಳಗಾದ ಪ್ರದೇಶ, ಹಳ್ಳ-ಕೊಳ್ಳ, ನದಿ ಪಾತ್ರದ ಪ್ರದೇಶಗಳನ್ನು ಹೊರತುಪಡಿಸಿ, ಇನ್ನುಳಿದ ಪ್ರದೇಶಗಳಲ್ಲಿ ಕೃಷಿ ಜಮೀನುಗಳನ್ನು ಕೃಷಿಯೇತರ ಉದ್ದೇಶಗಳಿಗಾಗಿ ಅಂದರೆ ವಸತಿ ಕಟ್ಟಡಗಳು, ವಾಣಿಜ್ಯ ಕಟ್ಟಡಗಳು, ಶಾಲೆಗಳು, ರೆಸಾರ್ಟ್‌ಗಳು, ಪೆಟ್ರೋಲ್ ಬಂಕ್‌ಗಳು ಅಥವಾ ಖಾಸಗಿ ಉದ್ಯಮಗಳಿಗಾಗಿ ಭೂ ಪರಿವರ್ತಿಸಲು ತಾಂತ್ರಿಕ ಸಮಿತಿಯ ನಿರಾಕ್ಷೇಪಣಾ ಪತ್ರದ ಮೇಲೆ ಸಂಬಂಧಪಟ್ಟ ಗ್ರಾಮ ಪಂಚಾಯತಿ ಹಾಗೂ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳಿಂದ ನಿಯಮಾನುಸಾರ ಅನುಮತಿ ಪಡೆದು ಕಟ್ಟಡಗಳನ್ನು ನಿರ್ಮಿಸಲು ಸೂಚಿಸಲಾಗಿದೆ.<br><br>(ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 04.06.2020ರಂದು ತಾಂತ್ರಿಕ ಸಮಿತಿಯನ್ನು ರಚಿಸಲಾಗಿದ್ದು ಈ ಸಮಿತಿಯಲ್ಲಿ ಭಾರತೀಯ ಭೂ ವೈಜ್ಞಾನಿಕ ಸರ್ವೇಕ್ಷಣಾ ಇಲಾಖೆಯ ತಜ್ಞರು, ಉಪ ನಿರ್ದೇಶಕರು, ಭೂ ದಾಖಲೆಗಳು, ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಧಿಕಾರಿಗಳು ಸದಸ್ಯರಾಗಿದ್ದು, ಸಂಬಂಧಪಟ್ಟ ತಹಶೀಲ್ದಾರರು ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ).<br>(ತದನಂತರ, ದಿನಾಂಕ: 09.05.2022ರ ಆದೇಶದಲ್ಲಿ ತಾಂತ್ರಿಕ ಸಮಿತಿಯಿಂದ ಭಾರತೀಯ ಭೂ ವೈಜ್ಞಾನಿಕ ಸರ್ವೇಕ್ಷಣಾ ಇಲಾಖೆಯ ತಜ್ಞರು ಇವರನ್ನು ಕೈಬಿಟ್ಟು ಅವರ ಬದಲಿಗೆ ಹಿರಿಯ ಭೂ ವಿಜ್ಞಾನಿ / ಉಪ ನಿರ್ದೇಶಕರು, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಇವರನ್ನು ಸದಸ್ಯರನ್ನಾಗಿ ಸೇರಿಸಲಾಗಿದೆ).</td>
</tr>
<tr>
<td>ಉ)</td>
<td>ಹವಾಮಾನ ವೈಪರೀತ್ಯ ಆಗುತ್ತಿರುವುದನ್ನು ಸರ್ಕಾರ ಮನಗಂಡಿದೆಯೇ; ಕಳೆದ 5 ವರ್ಷಗಳಲ್ಲಿ ಮಳೆಯು ಯಾವ ಪ್ರಮಾಣದಲ್ಲಿದೆ; (ಮಾಹಿತಿ ನೀಡುವುದು)</td>
<td>ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಕಳೆದ 5 ವರ್ಷಗಳ ಮಳೆ ವಿವರಗಳನ್ನು ಈ ಕೆಳಕಂಡಂತೆ ನೀಡಲಾಗಿದೆ;-
<table>
<tr><th>ಕ್ರ. ಸಂ.</th><th>ವರ್ಷ</th><th>ಮಳೆ ಪ್ರಮಾಣ (ಮಿ.ಮೀ)</th></tr>
<tr><td>1</td><td>2018-19</td><td>4052.21</td></tr>
<tr><td>2</td><td>2019-20</td><td>3185.7</td></tr>
<tr><td>3</td><td>2020-21</td><td>2889.1</td></tr>
<tr><td>4</td><td>2021-22</td><td>2656.1</td></tr>
<tr><td>5</td><td>2022-23</td><td>3035.7</td></tr>
</table>
</td>
</tr>
<tr>
<td>ಊ)</td>
<td>ಮುಂದಿನ ದಿನಗಳಲ್ಲಿ ರಾಜ್ಯದ ಜನತೆಗೆ ನೀರಿನ ಅಭಾವ ತಪ್ಪಿಸುವಂತಾಗಲು ಕೊಡಗು ಜಿಲ್ಲೆ ಪ್ರತ್ಯೇಕವಾದ ಭೂ ಪರಿವರ್ತನೆಯ ಕಾನೂನನ್ನು ಜಾರಿಗೊಳಿಸುವುದು ಅನಿವಾರ್ಯವಾಗಿದ್ದು, ಕೂಡಲೇ ಈ ಕುರಿತು ಪ್ರತ್ಯೇಕ ಕಾನೂನನ್ನು</td>
<td>ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಪ್ರತ್ಯೇಕವಾದ ಕಾನೂನು</td>
</tr>
</table>

| | | |
|---|---|---|
| | ರೂಪಿಸಲಾಗುವುದೇ; ಈ ಕುರಿತು ಮುಂದಿನ ದಿನಗಳಲ್ಲಿ ಹೋರಾಟದ ಹಾದಿಯನ್ನು ಹಿಡಿಯುವ ಸೂಚನೆ ಕೇಳಿಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ರೂಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: ಆರ್‌ಡಿ 56 ಎಲ್‌ಜಿಕ್ಯೂ 2023

(ಕೃಷ್ಣ ಭೈರೇಗೌಡ)
ಕಂದಾಯ ಸಚಿವರು